# <u>ಕರ್ನಾಟಕ ಸರ್ಕಾರ</u>

ಸಂ: ಮಮಇ 105 ಮಮಅ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11-05-2022.

## <u>ಜಂಟಿ ಸುತ್ತೋಲೆ</u>

**ವಿಷಯ**: ಬಾಲ್ಯವಿವಾಹ ನಿಷೇಧ ಕಾಯ್ದೆಯ ಸಮರ್ಪಕ ಅನುಷ್ಠಾನ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಲಕಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗಳ ಸಹಭಾಗಿತ್ವದಲ್ಲಿ ಕೈಗೊಳ್ಳಬೇಕಿರುವ ಕ್ರಮಗಳ ಕುರಿತಂತೆ.

**ಉಲ್ಲೇಖ**:
1. ಸಂಖ್ಯೆ: ಸಂ.ವ್ಯ.ಇ./47/ಕೇ.ನಿ.ಪ್ರ./2017-18 ಬೆಂಗಳೂರು. ದಿನಾಂಕ: 16.01.2018 ರ ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು, 2014.
2. ಸಂ: ಮಮಇ/205/ಮಮಅ/2011 (ಭಾ-1) ದಿನಾಂಕ: 28.08.2018 ರ ಅಧಿಸೂಚನೆ.

*****

**2019-20 ರ NFHS-5** ರ ವರದಿಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಪ್ರತಿಶತ **21.3** ರಷ್ಟು ಬಾಲ್ಯವಿವಾಹ ಪ್ರಕರಣಗಳು ನಡೆದಿರುವುದು ವರದಿಯಾಗಿರುತ್ತದೆ. **ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016 ನ್ನು** ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮತ್ತು ನಿಗದಿಪಡಿಸಿರುವ ಸುಸ್ಥಿರ ಅಭಿವೃದ್ಧಿ ಗುರಿಯಂತೆ 2022 ರ ಅಂತ್ಯಕ್ಕೆ ಬಾಲ್ಯವಿವಾಹ ಪ್ರಕರಣಗಳನ್ನು ಶೂನ್ಯಕ್ಕೆ ಇಳಿಸುವ ನಿಟ್ಟಿನಲ್ಲಿ ಅತ್ಯಂತ ಪರಿಣಾಮಕಾರಿ ಕ್ರಮಗಳನ್ನು ಜಾರಿಗೊಳಿಸುವುದು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ವಿವಿಧ ಇಲಾಖೆಗಳ ಸಹಕಾರದೊಂದಿಗೆ ದಿನಾಂಕ: **06.03.2022** ರಿಂದ ಒಂದು ಆಂದೋಲನದ ರೂಪದಲ್ಲಿ ವಿಶೇಷ ಕಾರ್ಯಕ್ರಮವಾಗಿ **ಬಾಲ್ಯವಿವಾಹ ನಿಷೇಧ** ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆ ಹಾಗೂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸದಸ್ಯರಾಗಿರುವ ಬಾಲ್ಯ ವಿವಾಹ ತಡೆ ಕುರಿತಂತೆ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆಯ ಅನುಷ್ಠಾನಕ್ಕಾಗಿ ಈ ಕೆಳಗಿನ ಕ್ರಮಗಳನ್ನು ಕೈಗೊಳ್ಳುವುದು.

### <u>ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರು ಕೈಗೊಳ್ಳಬೇಕಾದ ಕ್ರಮಗಳು.</u>

- ಅಧಿಸೂಚನೆ ಸಂಖ್ಯೆ: ಡಬ್ಲ್ಯೂಸಿಡಿ 205 ಎಸ್ ಡಬ್ಲ್ಯೂಡಬ್ಲ್ಯೂ, 2011, ದಿ: 21.10.2015 ರನ್ವಯ ಈ ಕೆಳಕಂಡ ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಎಂದು ಗುರುತಿಸಲಾಗಿದ್ದು ಸದರಿಯವರು ಬಾಲ್ಯವಿವಾಹ ನಿಷೇಧ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸುವುದು.

**ಜಿಲ್ಲಾಮಟ್ಟ** – ಉಪನಿರ್ದೇಶಕರು, ನಿರೂಪಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ, ಮಕ್ಕಳ ರಕ್ಷಣಾ ನಿರ್ದೇಶನಾಲಯ.

**ತಾಲ್ಲೂಕು ಮಟ್ಟ** – ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಂರಕ್ಷಣಾಧಿಕಾರಿಗಳು (ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ), ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

**ಐ.ಸಿ.ಡಿ.ಎಸ್. ವಲಯ ವ್ಯಾಪ್ತಿ** – ಮೇಲ್ವಿಚಾರಕಿಯರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

- ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು, **2014** ರ ಅನುಸೂಚಿ-I ರನ್ವಯ ಬಾಲ್ಯವಿವಾಹ ನಿಷೇಧ ಅಧಿಕಾರಿಯ ಮತ್ತು ವಿವಿಧ ಇಲಾಖೆಗಳ ನಿರ್ದಿಷ್ಟ ಪಾತ್ರಗಳ ಕುರಿತಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸಚಿವಾಲಯದ ಅಧಿಸೂಚನೆ ಸಂಖ್ಯೆ:ಡಬ್ಲ್ಯೂ.ಸಿ.ಡಿ. **205** ಎಸ್.ಡಬ್ಲ್ಯೂ.ಡಬ್ಲ್ಯೂ. **2011**, ದಿ:**21.10.2015** ರನ್ವಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ನಿಗದಿಪಡಿಸಲಾದ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು ಕೈಗೊಳ್ಳಬೇಕಾದ ಕರ್ತವ್ಯಗಳನ್ನು ಯಥಾ ಪ್ರಕಾರ ನಿರ್ವಹಿಸುವುದು (ಅಧಿಸೂಚನೆ ಪ್ರತಿ ಲಗತ್ತಿಸಿದೆ).

- ಸರ್ಕಾರದ ಆದೇಶ ಸಂಖ್ಯೆ:ಸಂವ್ಯಶಾಇ **44** ಶಾಸನ **2015**, ಬೆಂಗಳೂರು. ದಿನಾಂಕ:**26.04.2017** ರಂತೆ ಕರ್ನಾಟಕ ಬಾಲ್ಯವಿವಾಹ ನಿಷೇಧ ಕಾಯ್ದೆ (ತಿದ್ದುಪಡಿ)-**2016** ರಂತೆ **03.03.2018** ರ ನಂತರ ನಡೆದ ಎಲ್ಲಾ ಬಾಲ್ಯವಿವಾಹಗಳು ಅನೂರ್ಜಿತ ಹಾಗೂ ಅಸಿಂಧುವಾಗಿರುತ್ತವೆ. ಪೋಲೀಸ್ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ನಡೆಯುವ ಬಾಲ್ಯ ವಿವಾಹ ಪ್ರಕರಣಗಳನ್ನು ಸ್ವಯಂಪ್ರೇರಿತವಾಗಿ ದೂರು ಕಡ್ಡಾಯವಾಗಿ ದಾಖಲು ಮಾಡಿಕೊಳ್ಳಬೇಕಿರುತ್ತದೆ. ಎಲ್ಲಾ ಬಾಲ್ಯ ವಿವಾಹ ನಡೆದ ಹಾಗೂ ತಡೆದ ಪ್ರಕರಣಗಳಲ್ಲಿ, ಕಾಯ್ದೆಯಂತೆ **FIR** ದಾಖಲಿಸಲು ಕ್ರಮ ಕೈಗೊಳ್ಳುವುದು.

- ಬಾಲ್ಯವಿವಾಹ ನಿಷೇಧ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿಸಿದಂತೆ ಇರುವ ಶಿಕ್ಷೆಗಳ ಕುರಿತಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

- ಬಾಲ್ಯವಿವಾಹಕ್ಕೊಳಗಾದ ಮತ್ತು ಬಾಲ್ಯವಿವಾಹ ತಡೆದ ಪ್ರಕರಣಗಳಲ್ಲಿ ರಕ್ಷಣೆ, ಪುನರ್ವಸತಿ ಅಗತ್ಯವಿರುವ ಬಾಲಕಿಯರಿಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಹಾಗೂ ಮಕ್ಕಳ ಕಲ್ಯಾಣ ಸಮಿತಿ ಸಹಕಾರದೊಂದಿಗೆ ಅಗತ್ಯ ನೆರವು ಒದಗಿಸುವುದು ಹಾಗೂ **18** ವರ್ಷಗಳವರೆಗೆ ಬಾಲಕಿಯರ ಪುನರ್ವಸತಿ ಕುರಿತಂತೆ ಅನುಸರಣೆ ಕೈಗೊಳ್ಳುವುದು.

- ಬಾಲ್ಯವಿವಾಹ ನಿಷೇಧ ಕಾಯ್ದೆಯ ಉಲ್ಲಂಘನೆಗೆ ಶಿಕ್ಷೆ, ಬಾಲ್ಯವಿವಾಹದ ದುಷ್ಪರಿಣಾಮಗಳು, ಹೆಣ್ಣುಮಕ್ಕಳ ಸಬಲೀಕರಣ, 1098 ಮಕ್ಕಳ ಸಹಾಯವಾಣಿ, ಬಾಲ್ಯವಿವಾಹ ನಿಷೇಧ ಅಧಿಕಾರಿಗಳ ಕರ್ತವ್ಯ, ಯಶೋಗಾಥೆಗಳು, ಬಾಲ್ಯ ವಿವಾಹ ನಿಷೇಧ ಕಾಯ್ದೆ-2016ರ ತಿದ್ದುಪಡಿ ಪರಿಣಾಮಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಯಲು ಸಂಪರ್ಕಿಸಬೇಕಾದ ವ್ಯಕ್ತಿಗಳ ಕುರಿತಂತೆ ಪ್ರಮುಖವಾಗಿ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿರುವ ಪ್ರೌಢಶಾಲೆಗಳ ವಿದ್ಯಾರ್ಥಿಗಳಿಗೆ, ಪೋಷಕರು, ಸ್ತ್ರೀಶಕ್ತಿ ಸಂಘದ ಮಹಿಳೆಯರು, ಗ್ರಾಮ ಪಂಚಾಯಿತಿ/ನಗರ ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ಗ್ರಾಮ ಪಂಚಾಯಿತಿ ವ್ಯಾಪ್ತಿ/ನಗರ ಪ್ರದೇಶಗಳಲ್ಲಿರುವ ಯುವ ಸಮುದಾಯದ ಹೆಣ್ಣು ಮಕ್ಕಳಲ್ಲಿ ಅರಿವು ಮೂಡಿಸುವುದು.

- ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ವಿನೂತನ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಹಮ್ಮಿಕೊಳ್ಳುವುದು.

- ಪ್ರಾಯಪೂರ್ವ ಬಾಲಕಿಯರ ಯೋಜನೆಯಡಿ ಶಾಲೆಯಿಂದ ಹೊರಗುಳಿದ 11-14 ವರ್ಷದ ಬಾಲಕಿಯರನ್ನು ಗುರುತಿಸಿ, ಸದರಿ ಬಾಲಕಿಯರನ್ನು ಶಿಕ್ಷಣ ಇಲಾಖೆಯ ಸಹಕಾರದೊಂದಿಗೆ ಶಾಲೆಗೆ ಸೇರಿಸಲು ಕ್ರಮ ಕೈಗೊಳ್ಳುವುದು.

- ಪ್ರಾಯಪೂರ್ವ ಬಾಲಕಿಯರ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಮತ್ತು ಕನ್ಯಾ ಶಿಕ್ಷಾ ಪ್ರವೇಶ್ ಕಾರ್ಯಕ್ರಮಗಳನ್ನು ಒಟ್ಟಾಗಿ ಅನುಷ್ಠಾನಗೊಳಿಸುವುದರೊಂದಿಗೆ ಶಿಕ್ಷಣ ಇಲಾಖೆಯ ಸಹಕಾರ ಪಡೆದು 11-18 ವರ್ಷದ ಶಾಲೆಯಿಂದ ಹೊರಗುಳಿದ ಹದಿಹರೆಯದ ಹೆಣ್ಣು ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ, open schooling ವ್ಯವಸ್ಥೆಯಡಿ ಶಿಕ್ಷಣ ಮುಂದುವರೆಸುವ, ಕೌಶಲ್ಯಾಭಿವೃದ್ಧಿ ತರಬೇತಿ ಒದಗಿಸುವ ಕುರಿತಂತೆ ಕ್ರಮವಹಿಸುವುದು.

**<u>ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಕೈಗೊಳ್ಳಬೇಕಾದ ಕ್ರಮಗಳು.</u>**

- ಅಧಿಸೂಚನೆ ಸಂಖ್ಯೆ:ಡಬ್ಲ್ಯೂಸಿಡಿ 205 ಎಸ್ ಡಬ್ಲ್ಯೂಡಬ್ಲ್ಯೂ, 2011, ದಿ:21.10.2015 ರನ್ವಯ ಈ ಕೆಳಕಂಡ ಅಧಿಕಾರಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳೆಂದು ಎಂದು ಗುರುತಿಸಲಾಗಿದ್ದು, ಸದರಿಯವರು ಅಗತ್ಯ ಕ್ರಮ ಜರುಗಿಸುವುದು.

  **ಜಿಲ್ಲಾಮಟ್ಟ** – ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,
  **ತಾಲ್ಲೂಕು ಮಟ್ಟ** – ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ, ಇಲಾಖೆ.
  **ಗ್ರಾಮ ವ್ಯಾಪ್ತಿ** – ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಣ ಇಲಾಖೆ.
  **ಮಹಾನಗರ ಪಾಲಿಕೆ/ನಗರಸಭೆ/ಪುರಸಭೆ/ಪಟ್ಟಣ** –
  ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಣ ಇಲಾಖೆ.

- ಬಾಲ್ಯವಿವಾಹ ನಿಷೇಧ(ಕರ್ನಾಟಕ) ನಿಯಮಗಳು, 2014 ರ ಅನುಸೂಚಿ-I ರನ್ವಯ ಬಾಲ್ಯವಿವಾಹ ನಿಷೇಧ ಅಧಿಕಾರಿಯ ಮತ್ತು ವಿವಿಧ ಇಲಾಖೆಗಳ ನಿರ್ದಿಷ್ಟ ಪಾತ್ರಗಳ ಕುರಿತಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ, ಸಚಿವಾಲಯದ ಅಧಿಸೂಚನೆ ಸಂಖ್ಯೆ:ಡಬ್ಲ್ಯೂಸಿಡಿ 205 ಎಸ್ ಡಬ್ಲ್ಯೂಡಬ್ಲ್ಯೂ, 2011, ದಿ:21.10.2015 ರನ್ವಯ ಶಿಕ್ಷಣ ಇಲಾಖೆಯಡಿ ನಿಗದಿಪಡಿಸಲಾದ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು ಕೈಗೊಳ್ಳಬೇಕಾದ ಕರ್ತವ್ಯಗಳನ್ನು ಯಥಾ ಪ್ರಕಾರ ನಿರ್ವಹಿಸುವುದು (ಅಧಿಸೂಚನೆ ಪ್ರತಿ ಲಗತ್ತಿಸಿದೆ).

- ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯನ್ವಯ 6-14 ವರ್ಷದ ಎಲ್ಲಾ ಮಕ್ಕಳು ವಿಶೇಷವಾಗಿ ಹೆಣ್ಣು ಮಕ್ಕಳು ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನದನ್ವಯ 18 ವರ್ಷದೊಳಗಿನ ಎಲ್ಲಾ ಹೆಣ್ಣು ಮಕ್ಕಳು ಶಿಕ್ಷಣ, ಕೌಶಲ್ಯಾಭಿವೃದ್ಧಿ ತರಬೇತಿ ಪಡೆಯಲು ಅನುವಾಗುವಂತೆ ಕ್ರಮ ಕೈಗೊಳ್ಳುವುದು.

- ಶಾಲೆ ಬಿಟ್ಟ ಹೆಣ್ಣುಮಕ್ಕಳನ್ನು ಪುನಃ ಶಾಲೆಗೆ ಸೇರಿಸಿ 18 ವರ್ಷದವರೆಗೆ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನ ಒಲಿಸಿ ಕ್ರಮ ಕೈಗೊಳ್ಳುವುದು.

- ಹೆಣ್ಣುಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣ ಮಾಡುವುದು.

- ಹೆಣ್ಣುಮಕ್ಕಳು ಶಿಕ್ಷಣ ಮುಂದುವರೆಸಲು ಅನುವಾಗುವಂತೆ ವಿದ್ಯಾರ್ಥಿವೇತನ, ಸಂಚಾರ ವ್ಯವಸ್ಥೆ, ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯ, ಸ್ಯಾನಿಟರಿಪ್ಯಾಡ್‌ಗಳ

ವ್ಯವಸ್ಥೆ, ಪ್ಯಾಡ್‌ಗಳ ವಿಲೇವಾರಿ ವ್ಯವಸ್ಥೆ, ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿಶ್ರಾಂತಿ ಕೊಠಡಿ ವ್ಯವಸ್ಥೆ ಕಲ್ಪಿಸುವುದು.

- ಮೀನಾ ಗುಂಪುಗಳನ್ನು ಪುನಶ್ಚೇತನಗೊಳಿಸಿ, ಸಬಲಗೊಳಿಸುವುದು. ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆ ಅಳವಡಿಸಿ ಹೆಣ್ಣುಮಕ್ಕಳ ಕುಂದು-ಕೊರತೆಗಳನ್ನು ನಿವಾರಿಸುವುದು.

- ಗಂಡು ಹಾಗೂ ಹೆಣ್ಣು ಮಕ್ಕಳಿಗೆ ಲಿಂಗತ್ವ, ಲಿಂಗ ಸಮಾನತೆ, ಸಮಾನ ಅವಕಾಶ, ಗೌರವಯುತ ಮತ್ತು ದೌರ್ಜನ್ಯರಹಿತ ಜೀವನ ನಿರ್ವಹಣೆ ಕೈಗೊಳ್ಳುವ ಕುರಿತಂತೆ ತಿಳುವಳಿಕೆ ಮೂಡಿಸುವುದು.

- ಹೆಣ್ಣುಮಕ್ಕಳ ಶಾಲಾ ದಾಖಲಾತಿ ಮತ್ತು ಹಾಜರಾತಿಯನ್ನು ನಿಯಮಿತವಾಗಿ ಪರಿಶೀಲಿಸಿ ಶಾಲೆಗೆ ಗೈರುಹಾಜರಾದ ಮಕ್ಕಳ ಮನೆ ಭೇಟಿಮಾಡಿ ವಿವರಗಳನ್ನು ಪಡೆಯುವುದು ಹಾಗೂ ಆ ಮಕ್ಕಳನ್ನು ಪುನಃ ಶಾಲೆಗೆ ಸೇರಿಸಲು ಕ್ರಮಕೈಗೊಳ್ಳುವುದು.

- ಹದಿಹರೆಯದ ಸಮಸ್ಯೆಗಳ ಕುರಿತಂತೆ, ಋತುಸ್ರಾವದ ಸ್ವಚ್ಛತೆ ಹಾಗೂ ನಿರ್ವಹಣೆ ಕುರಿತಂತೆ, ಶಿಕ್ಷಣ ಹಾಗೂ ವೃತ್ತಿ ತರಬೇತಿ ಕುರಿತಂತೆ ಸಮಾಲೋಚನೆ, ಬಾಲನ್ಯಾಯ ಕಾಯ್ದೆ ಕುರಿತಂತೆ ಮಾಹಿತಿ, ಮಕ್ಕಳ ಹಕ್ಕುಗಳ ಕುರಿತಂತೆ ಮಾಹಿತಿ, ವ್ಯಕ್ತಿತ್ವ ವಿಕಸನ ಕಾರ್ಯಕ್ರಮ, ಜೀವನ ಕೌಶಲ್ಯ ತರಬೇತಿ, ಸ್ವಯಂ ರಕ್ಷಣಾ ತರಬೇತಿಗಳನ್ನು ಆಯೋಜಿಸುವುದು.

- ಪ್ರಾಯಪೂರ್ವ ಬಾಲಕಿಯರ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಮತ್ತು ಕನ್ಯಾ ಶಿಕ್ಷಾ ಪ್ರವೇಶ್ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಕಾರದೊಂದಿಗೆ 11-18 ವರ್ಷದ ಶಾಲೆಯಿಂದ ಹೊರಗುಳಿದ ಹದಿಹರೆಯದ ಹೆಣ್ಣು ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ, open schooling ವ್ಯವಸ್ಥೆಯಡಿ ಶಿಕ್ಷಣ ಮುಂದುವರೆಸುವ, ಕೌಶಲ್ಯಾಭಿವೃದ್ಧಿ ತರಬೇತಿ ಒದಗಿಸುವ ಕುರಿತಂತೆ ಕ್ರಮವಹಿಸುವುದು.

(ಡಾ|| ಎಸ್. ಸೆಲ್ವಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

(ಡಾ|| ರೇಜು ಎಂ.ಟಿ)
ಸರ್ಕಾರದ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರೀಕರ ಸಬಲೀಕರಣ ಇಲಾಖೆ

**ಪ್ರತಿಗಳು**

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
5. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ (ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರ ಮೂಲಕ).

6. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮೂಲಕ).
7. ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರು (ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮೂಲಕ).
8. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು (ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮೂಲಕ)
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯನಾಗರಿಕ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಕಚೇರಿ ಪ್ರತಿ.